ಕರ್ನಾಟಕ ಸರ್ಕಾರ

# ಜಿಲ್ಲಾ ಪಂಚಾಯತ ಕಾರ್ಯಾಲಯ ಯಾದಗಿರಿ

E-mail : ceoyadgir@gmail.com ಫ್ಯಾಕ್ಸ್ : 08473 253756, ದೂರವಾಣಿ : 253750

ಸಂ: ಜಿಪಂಯಾ/ಆ/ಸಿ-1 /56107/2026 ದಿನಾಂಕ: 12.07.2026

## ಪರಿಷ್ಕೃತ ಅಧಿಸೂಚನೆ

**ವಿಷಯ:** ಯಾದಗಿರಿ ಜಿಲ್ಲಾ ವ್ಯಾಪ್ತಿಯ ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರದ ಮೇಲ್ವಿಚಾರಕರ ಖಾಲಿ ಹುದ್ದೆಗಳಿಗೆ ನೇಮಕಾತಿ ಮಾಡುವ ಕುರಿತು.

**ಉಲ್ಲೇಖ:1.** ಸರ್ಕಾರದ ಅಧಿಸೂಚನೆ ಸಂ: RDPR/ 156/ GPA/ 2022(ಇ) ದಿನಾಂಕ : 14.11.2022

2. ಈ ಕಚೇರಿ ಅಧಿಸೂಚನೆ ಸಂ :ಜಿಪಂಯಾ/ಆ/ಸಿ-1/ 56107/ 2026/ 2903 ದಿನಾಂಕ :10.07.2026

*****

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ(1)ರ ಸರ್ಕಾರದ ಅಧಿಸೂಚನೆ ಪ್ರಕಾರ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ ಸೇವಾ) ನಿಯಮಗಳು-2022 ನಿಯಮಗಳಡಿಯಲ್ಲಿ **ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ** ಖಾಲಿ ಹುದ್ದೆಗಳಿಗೆ ನೇಮಕಾತಿ ಪ್ರಕ್ರಿಯೆಯನ್ನು ಕೈಗೊಳ್ಳಲು ಅವಕಾಶ ಕಲ್ಪಿಸಲಾಗಿರುತ್ತದೆ. ಪ್ರಯುಕ್ತ ಯಾದಗಿರಿ ಜಿಲ್ಲಾ ವ್ಯಾಪ್ತಿಯಲ್ಲಿನ ಗ್ರಾಮ ಪಂಚಾಯತಿಗಳಲ್ಲಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳನ್ನು ಸ್ಥಾಪಿಸಿದ್ದು, ಸದರಿ ಗ್ರಾಮ ಪಂಚಾಯತಿ ಗ್ರಂಥಾಲಯಗಳಿಗೆ ಪ್ರಸ್ತುತ ಖಾಲಿ ಇರುವ ಪ್ರತಿ ಗ್ರಾಮ ಪಂಚಾಯತಿಗೆ ಒಂದರಂತೆ ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಯನ್ನು ಉಲ್ಲೇಖ(2)ರನ್ವಯ ಆಹ್ವಾನಿಸಲಾಗಿತ್ತು.

ಪ್ರಸ್ತುತ ಇತರೆ ಗ್ರಾ.ಪಂ ಗಳಲ್ಲಿ **ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ** ಹುದ್ದೆಗಳು ವರ್ಗಾವಣೆ/ನಿವೃತ್ತಿ ಹಾಗೂ ಇತರೆ ಕಾರಣಗಳಿಂದ ಖಾಲಿ ಆಗಿರುವ ಹಿನ್ನಲೆಯಲ್ಲಿ ಉಲ್ಲೇಖ(2)ರ ಅಧಿಸೂಚನೆ ಹಿಂಪಡೆಯಲಾಗಿದೆ. ಮತ್ತು ಸದರಿ ಹುದ್ದೆಗಳನ್ನು ಸೇರ್ಪಡೆ ಮಾಡಿಕೊಂಡು ಪರಿಷ್ಕೃತ ಅಧಿಸೂಚನೆ ಹೊರಡಿಸಿದೆ. ಆಸಕ್ತ ಅಭ್ಯರ್ಥಿಗಳು ವೆಬ್ ಸೈಟ್ https://zpyadgiri.karnataka.gov.in ರ ಮೂಲಕ ತಮ್ಮ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ.

12/7/26

ಯಾದಗಿರಿ ಜಿಲ್ಲಾ ಪಂಚಾಯತಿ ವ್ಯಾಪ್ತಿಯ ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ ಖಾಲಿ ಹುದ್ದೆಗಳಿಗೆ ಸರ್ಕಾರದ ಆದೇಶಗಳಂತೆ ಲಂಬ ಮತ್ತು ಸಮತಳ ಮೀಸಲಾತಿ ನಿಗದಿಪಡಿಸಿದ ವಿವರ ಈ ಕೆಳಗಿನಂತೆ ಇದೆ.

| ಕ್ರ.ಸಂ | ತಾಲ್ಲೂಕಿನ ಹೆಸರು | ಗ್ರಾಮ ಪಂಚಾಯತಿಯ ಹೆಸರು | ಹುದ್ದೆ ಖಾಲಿಯಾದ ದಿನಾಂಕ | ಲಂಬ | ಸಮತಳ |
|---|---|---|---|---|---|
| 1 | ಯಾದಗಿರಿ | ವರ್ಕನಳ್ಳಿ | 25-11-2021 | ಸಾಮಾನ್ಯ | ಗ್ರಾಮೀಣ ಅಭ್ಯರ್ಥಿ |
| 2 | ಯಾದಗಿರಿ | ಠಾಣಗುಂದಿ | 09-03-2023 | 2ಎ | ಮಹಿಳೆ |
| 3 | ಸುರಪುರ | ಅರಕೇರಾ (ಕೆ (ಬಿಜಾಸಪೂರ) | 01.05.2023 | ಸಾಮಾನ್ಯ | ಇತರೆ |
| 4 | ಗುರಮಿಠಕಲ್ | ಅನಪೂರ | 01.06.2025 | ಪ.ಜಾ | ಗ್ರಾಮೀಣ ಅಭ್ಯರ್ಥಿ |
| 5 | ವಡಗೇರಾ | ವಡಗೇರಾ | 01-08-2025 | ಸಾಮಾನ್ಯ | ಮಹಿಳೆ |
| 6 | ಹುಣಸಗಿ | ಮೂದುನೂರ (ಕೆ) | 01.03.2026 | 3ಎ | ಇತರೆ |
| 7 | ಯಾದಗಿರಿ | ಬಂದಳ್ಳಿ | 27.04.2026 | ಸಾಮಾನ್ಯ | ಗ್ರಾಮೀಣ ಅಭ್ಯರ್ಥಿ |
| 8 | ಯಾದಗಿರಿ | ಕಿಲ್ಲನಕೇರಾ | 15.05.2026 | 3ಬಿ | ಇತರೆ |
| 9 | ಹುಣಸಗಿ | ನಾರಾಯಣಪೂರ | 29.05.2026 | ಸಾಮಾನ್ಯ | ಮಾಜಿ ಸೈನಿಕ |
| 10 | ಹುಣಸಗಿ | ಅರಕೇರಾ.ಜೆ | 01.06.2026 | 2ಎ | ಗ್ರಾಮೀಣ ಅಭ್ಯರ್ಥಿ |
| 11 | ಗುರಮಿಠಕಲ್ | ಪುಟಪಾಕ | 20.06.2026 | ಸಾಮಾನ್ಯ | ಮಹಿಳೆ |
| 12 | ಹುಣಸಗಿ | ರಾಜನಕೊಳ್ಳೂರು | 01.09.2026 | ಪ.ಜಾ | ಅಂಗವಿಕಲ |

**(ರಾಜನಕೊಳ್ಳೂರು ಗ್ರಾ.ಪಂ. ಗ್ರ & ಮಾ.ಕೇ.ಮೇ ಹುದ್ದೆಯು ದಿ: 01.09.2026ರಂದು ಖಾಲಿ ಆಗುವ ಕಾರಣ, ಸದರಿ ಹುದ್ದೆಯನ್ನು ತಾತ್ಕಾಲಿಕವಾಗಿ ಖಾಲಿ ಎಂದು ಪರಿಗಣಿಸಿದೆ, ಈ ಹುದ್ದೆಯ ಅಂತಿಮ ನೇಮಕಾತಿ, ನೇಮಕಾತಿ ನಿಯಮಗಳ ಪ್ರಕಾರ ಪರಿಗಣಿಸುವ ಷರತ್ತುಗಳಿಗೆ ಒಳಪಟ್ಟಿದೆ)**

*** 12ನೇ ರೋಸ್ಟರ್ ಬಿಂದುವಿನಿಂದ 23ರ ವರೆಗೆ**

**1) ಶೈಕ್ಷಣಿಕ ವಿದ್ಯಾರ್ಹತೆ :**

- **ದ್ವಿತೀಯ ಪದವಿ ಪೂರ್ವ ಪರೀಕ್ಷೆಯಲ್ಲಿ (ಪಿಯುಸಿ) ಉತ್ತೀರ್ಣರಾಗಿರಬೇಕು** ಮತ್ತು **ಸರ್ಟಿಫಿಕೇಷನ್ ಕೋರ್ಸ್ ಇನ್ ಲೈಬ್ರರಿ ಸೈನ್ಸ್** ಪ್ರಮಾಣ ಪತ್ರ ಪಡೆದಿರತಕ್ಕದ್ದು ಹಾಗೂ ಕನಿಷ್ಠ **03** ತಿಂಗಳು **ಕಂಪ್ಯೂಟರ್ ಕೋರ್ಸ್** ನಲ್ಲಿ ಉತ್ತೀರ್ಣರಾಗಿರಬೇಕು.
- ಒಂದು ವೇಳೆ ಸರ್ಟಿಫಿಕೇಷನ್ ಕೋರ್ಸ್ ಇನ್ ಲೈಬ್ರರಿ ಸೈನ್ಸ್ ಪದವಿ ಪಡೆದಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸದಿದ್ದಲ್ಲಿ **ಪಿ.ಯು.ಸಿ. ಪರೀಕ್ಷೆಯಲ್ಲಿ ಅಭ್ಯರ್ಥಿಯು ಗಳಿಸಿದ ಅಂಕಗಳನ್ನು** ಆಧರಿಸಿ ಅಧಿಸೂಚಿಸಿದ ಖಾಲಿ ಹುದ್ದೆಗಳಿಗೆ ಮೀಸಲಾತಿ ಬಿಂದುವಿನಂತೆ ಆಯ್ಕೆಗೆ ಪರಿಗಣಿಸಲಾಗುವುದು.

12/7/26

- ಈ ವಿದ್ಯಾರ್ಹತೆಯನ್ನು ಅಧಿಸೂಚನೆ ಹೊರಡಿಸುವ ದಿನಾಂಕಕ್ಕೆ ಮುಂಚಿತವಾಗಿ ಹೊಂದಿರಬೇಕು.
- ವಿದ್ಯಾರ್ಹತೆಯ ದಾಖಲಾತಿಗಳ ನೈಜತೆ ಬಗ್ಗೆ ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ದೃಢಪಡಿಸಿಕೊಂಡ ನಂತರ ನೇಮಕಾತಿ ಆದೇಶ ನೀಡಲಾಗುವುದು.

2) ವಾಸಸ್ಥಳ :

- **ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರದ ಮೇಲ್ವಿಚಾರಕರ ಖಾಲಿ** ಹುದ್ದೆಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಸಂಬಂಧಪಟ್ಟ **ಗ್ರಾಮ ಪಂಚಾಯತಿ ವ್ಯಾಪ್ತಿಯ ನಿವಾಸಿಯಾಗಿರತಕ್ಕದ್ದು.**
- ಪರಂತು ಸಂಬಂಧಪಟ್ಟ ಗ್ರಾಮ ಪಂಚಾಯತಿ ವ್ಯಾಪ್ತಿಯ ನಿವಾಸಿ ಲಭ್ಯತೆ ಇಲ್ಲದೆ ಇದ್ದಲ್ಲಿ **ಆಯಾ ತಾಲೂಕು ವ್ಯಾಪ್ತಿಯಲ್ಲಿನ ಹತ್ತಿರದ ಗ್ರಾಮ** ಪಂಚಾಯತಿಯ ಅಭ್ಯರ್ಥಿಗಳನ್ನು ಆಯ್ಕೆಗೆ ಪರಿಗಣಿಸಲಾಗುವುದು.
- ವಾಸಸ್ಥಳಕ್ಕೆ ಸಂಬಂಧಿಸಿದಂತೆ ಸಕ್ಷಮ ಪ್ರಾಧಿಕಾರವಾದ **ತಹಶೀಲ್ದಾರರಿಂದ ಅಥವಾ ನಿಗದಿಪಡಿಸಿದ ಪ್ರಾಧಿಕಾರದಿಂದ ವಾಸಸ್ಥಳ** ಪ್ರಮಾಣ ಪತ್ರವನ್ನು ಪಡೆದು ಸಲ್ಲಿಸತಕ್ಕದ್ದು.

3) **ವಯೋಮಿತಿ :** ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕಕ್ಕೆ ಅಭ್ಯರ್ಥಿಯು ಕನಿಷ್ಠ 18 ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು ಹಾಗೂ ಗರಿಷ್ಠ ವಯೋಮಿತಿಯನ್ನು **ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 262 ಸೇನೆನಿ 2025 ದಿನಾಂಕ:29.01.2026**ರನ್ವಯ ಈ ಕೆಳಕಂಡಂತೆ ಇರತಕ್ಕದ್ದು.

| ವರ್ಗ | ಪ್ರವರ್ಗ | ಗರಿಷ್ಠ ವಯೋಮಿತಿ |
|---|---|---|
| ಎ | ಸಾಮಾನ್ಯ ವರ್ಗ | 40 ವರ್ಷ |
| ಬಿ | 2ಎ, 2ಬಿ, 3ಎ, 3ಬಿ | 43 ವರ್ಷ |
| ಸಿ | ಪ.ಜಾತಿ / ಪ.ಪಂ / ಪ್ರವರ್ಗ-1 | 45 ವರ್ಷ |

ಮೇಲ್ಕಂಡ ಗರಿಷ್ಠ ವಯೋಮಿತಿಯಲ್ಲದೆ ಕರ್ನಾಟಕ ನಾಗರೀಕಾ ಸೇವಾ (ಸಾಮಾನ್ಯ ನೇಮಕಾತಿ) ನಿಯಮ 1977 ರಲ್ಲಿ ನಿರ್ಧಿಷ್ಟಪಡಿಸಿರುವಂತೆ ಈ ಕೆಳಗಿನ ಸಂದರ್ಭಗಳಲ್ಲಿ ಸದರಿ ನಿಯಮಗಳಲ್ಲಿ ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯನ್ನು ಈ ಕೆಳಗೆ ತಿಳಿಸಿರುವಷ್ಟರ ಮಟ್ಟಿಗೆ ಹೆಚ್ಚಿಸಲಾಗುವುದು.

- **ಮಾಜಿ ಸೈನಿಕ :** ಸೇವೆ ಸಲ್ಲಿಸಿರುವಷ್ಟು ವರ್ಷಗಳಿಗೆ **3 ವರ್ಷಗಳನ್ನು** ಸೇರಿಸಿದರೆ ಎಷ್ಟು ವರ್ಷಗಳಾಗುವವೋ ಅಷ್ಟು ವರ್ಷಗಳನ್ನು ವಯೋಮಿತಿಯಲ್ಲಿ ಹೆಚ್ಚಿಸಲಾಗುವುದು.
- **ವಿಧವೆಯಾಗಿದ್ದಲ್ಲಿ :** ಅಭ್ಯರ್ಥಿಯು ಸಕ್ಷಮ ಪ್ರಾಧಿಕಾರದಿಂದ ತಾನು ವಿಧವೆ ಎಂದು ಹಾಗೂ ಮರು ವಿವಾಹವಾಗಿರುವುದಿಲ್ಲವೆಂದು ಪ್ರಮಾಣ ಪತ್ರ ಸಲ್ಲಿಸಿದಲ್ಲಿ **10 ವರ್ಷಗಳ** ವಯೋಮಿತಿಯನ್ನು ಹೆಚ್ಚಿಸಲಾಗುವುದು.

12/7/26

- **ಅಂಗವಿಕಲ :** ಅಭ್ಯರ್ಥಿಯು ಸಕ್ಷಮ ಪ್ರಾಧಿಕಾರದಿಂದ ತಾನು ಅಂಗವಿಕಲ ಅಭ್ಯರ್ಥಿಯೆಂದು ಪಡೆದ ಪ್ರಮಾಣ ಪತ್ರ ಸಲ್ಲಿಸಿದಲ್ಲಿ **10 ವರ್ಷಗಳ** ವಯೋಮಿತಿಯಲ್ಲಿ ಹೆಚ್ಚಿಸಲಾಗುವುದು.
- **National Cadet Corps** ಪೂರ್ಣಕಾಲಿಕ ಪರಿವೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಗಳಿಗೆ Cadet ಪರಿವೀಕ್ಷಕರಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು.
- **ಯೋಜನಾ ನಿರಾಶ್ರಿತರು :** ಸರ್ಕಾರ ಆದೇಶ ಸಂಖ್ಯೆ: **ಸಿಆಸುಇ 23 ಸೇನೆನಿ 99 ದಿನಾಂಕ: 23/11/2000** ರನ್ವಯ ಯೋಜನೆಗಳಿಂದ ನಿರ್ವಸತಿರಾದ ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು ಸಂಬಂಧಿಸಿದ ತಹಶೀಲ್ದಾರರಿಂದ ನಿಗದಿತ ನಮೂನೆಯಲ್ಲಿ ಕೊನೆಯ ದಿನಾಂಕದೊಳಗಾಗಿ ಪ್ರಮಾಣ ಪತ್ರವನ್ನು ಪಡೆಯುವುದು.
- **ತೃತೀಯ ಲಿಂಗ :** ಜಿಲ್ಲಾ ಮ್ಯಾಜಿಸ್ಟ್ರೇಟ್ ರವರಿಂದ ಪ್ರಮಾಣ ಪತ್ರವನ್ನು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಲಗತ್ತಿಸುವುದು.
- **ಜೀತ ವಿಮುಕ್ತ : 10 ವರ್ಷಗಳು,** ಜೀತ ಕಾರ್ಮಿಕನಾಗಿದ್ದ ಪಕ್ಷದಲ್ಲಿ ಸದರಿ ಅಧಿನಿಯಮ ಅಥವಾ 1957 ರ ಕರ್ನಾಟಕ ಜೀತ ಕಾರ್ಮಿಕ ಪದ್ಧತಿ (ರದ್ದಿಯಾತಿ) ಆದೇಶದ ಮೇರೆಗೆ ಜೀತ ಸಾಲವನ್ನು ಸಂದಾಯ ಮಾಡುವ ಕೊನೆಯಿಂದ ಬಿಡುಗಡೆಯಾಗಿದ್ದಾನೆಂದು ಪ್ರಮಾಣ ಪತ್ರವನ್ನು ಜಿಲ್ಲಾ ಮ್ಯಾಜೀಸ್ಟ್ರೇಟ್ ರವರಿಂದ ಪಡೆದು ಸಲ್ಲಿಸುವುದು.

4) **ಜನ್ಮ ದಿನಾಂಕ: ಎಸ್.ಎಸ್.ಎಲ್.ಸಿ ಅಂಕಪಟ್ಟಿಯಲ್ಲಿ ನಮೂದಿಸಿರುವ ಜನ್ಮ ದಿನಾಂಕವನ್ನು** ಆಯ್ಕೆ ಪ್ರಾಧಿಕಾರವು ಪರಿಗಣಿಸುತ್ತದೆ. ಇತರೆ ಯಾವುದೇ ದಾಖಲೆಗಳನ್ನು ಪರಿಗಣಿಸುವುದಿಲ್ಲ.

5) **ಅರ್ಜಿ ಸಲ್ಲಿಸುವ ವಿಧಾನ :**

- **https://zpyadgiri.karnataka.gov.in** ವೆಬ್‌ಸೈಟ್ ಮೂಲಕ ಮಾತ್ರ ಅರ್ಜಿ ಸಲ್ಲಿಸಬೇಕು. ಅರ್ಜಿಯಲ್ಲಿ ಕೇಳಿರುವ ದಾಖಲೆಗಳನ್ನು **ಪತ್ರಾಂಕಿತ ಅಧಿಕಾರಿಗಳಿಂದ** ದೃಢೀಕರಿಸಿರಬೇಕು.
- ಅರ್ಜಿಗಳನ್ನು ಖುದ್ದಾಗಿ ಅಥವಾ ನೊಂದಾಯಿತ ಅಂಚೆ ಮೂಲಕ ಸಲ್ಲಿಸಲು ಅವಕಾಶ ಇರುವುದಿಲ್ಲ.

6) **ಅರ್ಜಿ ಶುಲ್ಕ: ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕ** ಹುದ್ದೆಗೆ ನೇಮಕಾತಿ ಮಾಡಿಕೊಳ್ಳುತ್ತಿರುವುದರಿಂದ **ಅರ್ಜಿ ಶುಲ್ಕ ಇರುವುದಿಲ್ಲ.**

7) **ಜಾತಿ ಮೀಸಲಾತಿ ಪ್ರಮಾಣ ಪತ್ರ:** ನಿಗದಿತ ನಮೂನೆಯಲ್ಲಿ ಜಾತಿ ಪ್ರಮಾಣ ಪತ್ರವನ್ನು **ತಹಶೀಲ್ದಾರರಿಂದ ಅರ್ಜಿ** ಸಲ್ಲಿಸುವ ಕೊನೆಯ ದಿನಾಂಕದೊಳಗಡೆ ಪಡೆದಿರಬೇಕು.

8) **ಆಯ್ಕೆ ವಿಧಾನ :**

- **ಶೈಕ್ಷಣಿಕ ಅರ್ಹತೆಯಲ್ಲಿನ ಮೆರಿಟ್ ಮತ್ತು ರೋಷ್ಟರ್ ಮೀಸಲಾತಿ** ಆಧಾರದ ಮೇಲೆ ಅಭ್ಯರ್ಥಿಗಳನ್ನು ಆಯ್ಕೆ

12/7/26

ಮಾಡಲಾಗುವುದು ಒಂದು ವೇಳೆ ಇಬ್ಬರು ಅಥವಾ ಹೆಚ್ಚಿನ ಅಭ್ಯರ್ಥಿಗಳು ಸಮಾನವಾದ ಅಂಕಗಳನ್ನು / ಮೆರಿಟನ್ನು ಹೊಂದಿದಲ್ಲಿ **ವಯಸ್ಸಿನಲ್ಲಿ ಹಿರಿಯರಾದವರನ್ನು** ಆಯ್ಕೆಗೆ ಪರಿಗಣಿಸಲಾಗುವುದು.

- ಹುದ್ದೆಗೆ ಸಂಬಂಧಿಸಿದಂತೆ ಸರ್ಟಿಫಿಕೇಷನ್ ಕೋರ್ಸ್ ಇನ್ ಲೈಬ್ರರಿ ಸೈನ್ಸ್ ಪದವಿ ಪಡೆದಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸದಿದ್ದಲ್ಲಿ **ಪಿ.ಯು.ಸಿ. ಪರೀಕ್ಷೆಯಲ್ಲಿ ಅಭ್ಯರ್ಥಿಯು ಗಳಿಸಿದ ಅಂಕಗಳನ್ನು ಆಧರಿಸಿ ಮೀಸಲಾತಿ ಬಿಂದುವಿನಂತೆ ಆಯ್ಕೆಗೆ** ಪರಿಗಣಿಸಲಾಗುವುದು. ಒಂದು ವೇಳೆ ಇಬ್ಬರು ಅಥವಾ ಹೆಚ್ಚಿನ ಅಭ್ಯರ್ಥಿಗಳು ಸಮಾನವಾದ ಅಂಕಗಳನ್ನು / ಮೆರಿಟ್ ಅನ್ನು ಹೊಂದಿದಲ್ಲಿ ವಯಸ್ಸಿನಲ್ಲಿ ಹಿರಿಯರಾದವರನ್ನು ಆಯ್ಕೆಗೆ ಪರಿಗಣಿಸಲಾಗುವುದು.
- ಗ್ರಾಮ ಪಂಚಾಯತಿವಾರು ಬಂದಿರುವ ಅರ್ಜಿಗಳನ್ನು ಮೆರಿಟ್ ಆಧಾರದ ಮೇಲೆ ಖಾಲಿ ಹುದ್ದೆಗಳಿಗೆ (ರೋಸ್ಟರ್ ಬಿಂದುವಿನಂತೆ) **ಸಮನಾಗಿ ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರವಾರು ಆಯ್ಕೆ ಪಟ್ಟಿಯನ್ನು ತಯಾರಿಸಲಾಗುವುದು.**

9) **ವೇತನ:** ಸರ್ಕಾರದ ಆದೇಶ ಸಂಖ್ಯೆ: **RDPR 425 ಜಿಪಅ 2023 ದಿ: 13.02.2024** ರಂತೆ ಪ್ರತಿ ಮಾಹೆ ಮಾಸಿಕ ಕನಿಷ್ಠ ವೇತನ ಹಾಗೂ ಕನಿಷ್ಠ ವೇತನದ ಜೊತೆಗೆ ಕಾರ್ಮಿಕ ಇಲಾಖೆಯು ಕಾಲಕಾಲಕ್ಕೆ ನಿಗದಿಪಡಿಸುವ ವ್ಯತ್ಯಯವಾಗುವ ತುಟ್ಟಿ ಭತ್ಯೆಯನ್ನು (VDA) ಪಾವತಿಸಲಾಗುವುದು.

**ಅರ್ಹತಾ ಷರತ್ತುಗಳು:**

1. ಭಾರತೀಯ ನಾಗರೀಕನಾಗಿರತಕ್ಕದ್ದು.
2. ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿ ಇರುವ ವ್ಯಕ್ತಿಯನ್ನು ಮದುವೆಯಾಗಿರುವ ಮಹಿಳಾ ಅಭ್ಯರ್ಥಿಯು ಸರ್ಕಾರದಿಂದ ಪೂರ್ವಾನುಮತಿಯನ್ನು ಪಡೆಯದೇ ನೇಮಕಾತಿ ಅರ್ಹರಾಗುವುದಿಲ್ಲ.
3. ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತನಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷತೆ ನಿರ್ವಹಣೆಗೆ ಆತಂಕ ಉಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನ್ಯತೆಯಿಂದ ಮುಕ್ತರಾಗಿರಬೇಕು.
4. ನಿಗದಿತ ಶೈಕ್ಷಣಿಕ ಅರ್ಹತೆಯ ಜೊತೆಗೆ ಈ ಮೇಲ್ಕಂಡ ಅರ್ಹತೆ ಹೊಂದಿರುವ ಅಭ್ಯರ್ಥಿಗಳು ನೇಮಕಾತಿಗಾಗಿ ಅರ್ಜಿ ಸಲ್ಲಿಸಲು ಅರ್ಹತೆ ಹೊಂದಿರುತ್ತಾರೆ.
5. ಸರ್ಕಾರದ ಅಧಿಸೂಚನೆ ಸಂಖ್ಯೆ: **ಆರ್‌ಡಿಪಿಆರ್/ 156/ ಜಿಪಿಎ/ 2022(ಇ) ದಿನಾಂಕ: 14-11-2022** ರ ಪ್ರಕಾರ ಅಧಿಸೂಚಿಸಿದ ಹುದ್ದೆಗಳ ನೇಮಕಾತಿಗೆ ವಿದ್ಯಾರ್ಹತೆಯನ್ನು ನಿಗದಿಪಡಿಸಲಾಗಿದೆ. (ಮಾಹಿತಿ ವೆಬ್‌ಸೈಟ್ ನಲ್ಲಿ ಲಭ್ಯವಿದೆ)

12/7/26

6. ಅಭ್ಯರ್ಥಿಗಳು ಅರ್ಜಿ ಭರ್ತಿ ಮಾಡುವ ಮೊದಲು ಎಲ್ಲಾ ವಿವರಗಳನ್ನು ಓದಿ ಅರ್ಥೈಸಿಕೊಂಡು ಆನಂತರವೇ ತಮಗೆ ಅನ್ವಯವಾಗುವ ವಿವರಗಳನ್ನು ಭರ್ತಿ ಮಾಡತಕ್ಕದ್ದು. **ಒಮ್ಮೆ ಅರ್ಜಿ ಸಲ್ಲಿಸಿದ ನಂತರ ಅರ್ಜಿಯಲ್ಲಿ ವಿವರಗಳನ್ನು ತಿದ್ದುಪಡಿ/ ಸೇರ್ಪಡೆ ಮಾಡುವಂತೆ ನೀಡುವ ಯಾವುದೇ ಮನವಿಗಳನ್ನು ತಿರಸ್ಕರಿಸಲಾಗುವುದು.**

7. **ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಅರ್ಜಿ ಸಲ್ಲಿಸತಕ್ಕದ್ದು**. ಆನಂತರ ಸಲ್ಲಿಸುವ ಯಾವುದೇ ಅರ್ಜಿಯನ್ನು ಸ್ವೀಕರಿಸುವುದಿಲ್ಲ.

8. ಸೈನಿಕ ಸೇವೆಯಿಂದ ಬಿಡುಗಡೆಯಾಗಿರುವ/ ತೆಗೆದುಹಾಕಿದ ಬಗೆಗಿನ ಪ್ರಮಾಣ ಪತ್ರಗಳನ್ನು (ಡಿಸ್ಚಾರ್ಜ್) (Discharge Certificate) ಮತ್ತು ಪಿಂಚಣಿ ಪಡೆಯುತ್ತಿರುವ ದಾಖಲೆಯ ಪ್ರತಿಯೊಡನೆ ಸೈನಿಕ ಅವಲಂಬಿತರಾಗಿದ್ದಲ್ಲಿ ಮಾಜಿ ಸೈನಿಕರು ಸೇವೆಯಲ್ಲಿದ್ದಾಗ ಮೃತಪಟ್ಟಿರುವ/ ಸೇವಾ ಅವಧಿಯಲ್ಲಿ ಉಂಟಾಗಿರುವ ಅಂಗವಿಕಲತೆ ಹೊಂದಿದ ಬಗ್ಗೆ ಪ್ರಮಾಣ ಪತ್ರ ಅರ್ಜಿಯೊಂದಿಗೆ ಸಲ್ಲಿಸುವುದು. (Dependent Certificate) (ಮಾಜಿ ಸೈನಿಕ ಮೀಸಲಾತಿ ಕೋರಿದ್ದಲ್ಲಿ).

9. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, 2ಬಿ, 3ಎ, 3ಬಿ ಮೀಸಲಾತಿ ಅಭ್ಯರ್ಥಿಗಳು ನಮೂನೆ ಡಿ/ಇ/ಎಫ್ ನಲ್ಲಿ ತಹಸೀಲ್ದಾರ್ ರವರ ಪಡೆದ ಪ್ರಮಾಣ ಪತ್ರ ಅರ್ಜಿಯೊಂದಿಗೆ ಸಲ್ಲಿಸುವುದು (ಮೀಸಲಾತಿ ಕೋರಿದ್ದಲ್ಲಿ).

10. ಸಾಮಾನ್ಯ ಅರ್ಹತೆ ಅಭ್ಯರ್ಥಿಗಳು ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ-01 ಮತ್ತು 02 ರಲ್ಲಿ/ ಇತರೆ ಅಭ್ಯರ್ಥಿಗಳು ನಮೂನೆ-02 ರಲ್ಲಿ ಅರ್ಜಿಯೊಂದಿಗೆ ಸಲ್ಲಿಸುವುದು (ಮೀಸಲಾತಿ ಕೋರಿದ್ದಲ್ಲಿ).

11. ಕನ್ನಡ ಮಾಧ್ಯಮ ವ್ಯಾಸಂಗ ಮಾಡಿದ ಪ್ರಮಾಣ ಪತ್ರ ಅರ್ಜಿಯೊಂದಿಗೆ ಸಲ್ಲಿಸುವುದು. (ಮೀಸಲಾತಿ ಕೋರಿದ್ದಲ್ಲಿ).

12. ವಿಶೇಷಚೇತನ ಮೀಸಲಾತಿ ಪ್ರಮಾಣ ಪತ್ರ ಅರ್ಜಿಯೊಂದಿಗೆ ಸಲ್ಲಿಸುವುದು. (ಮೀಸಲಾತಿ ಕೋರಿದ್ದಲ್ಲಿ) ಹಾಗೂ ಸರ್ಕಾರದ ಆದೇಶ ಸಂಖ್ಯೆ: **ಸಿಆಸುಇ/149/ಎಸ್‌ಆರ್‌ಆರ್/2020 ಬೆಂಗಳೂರು ದಿನಾಂಕ: 25-09-2020** ರಲ್ಲಿ ಗ್ರೂಪ್ ಸಿ ಮತ್ತು ಡಿ ಹುದ್ದೆಗಳಿಗೆ ಶೇ. 5 ರಷ್ಟು ವಿಶೇಷಚೇತನರಿಗೆ ಮೀಸಲಾತಿ ಕಲ್ಪಿಸಿದ್ದು, ಇದರನ್ವಯ ಶೇ. 40 ಕ್ಕಿಂತ ಕಡಿಮೆ ಇಲ್ಲದಂತಹ ಅಂಗವಿಕಲತೆಯುಳ್ಳ ಅಭ್ಯರ್ಥಿಗಳು ಮಾತ್ರ ಈ ಮೀಸಲಾತಿಯನ್ನು ಕೋರಲು ಅರ್ಹರಿರುತ್ತಾರೆ. ಅಂಗವಿಕಲತೆಯ ಬಗ್ಗೆ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿನ ವೈದ್ಯಕೀಯ ಪ್ರಾಧಿಕಾರ/ ತಾಲ್ಲೂಕು ಮಟ್ಟದ ವೈದ್ಯಕೀಯ ಪ್ರಾಧಿಕಾರ/ ಜಿಲ್ಲಾ ಮಟ್ಟದ ವೈದ್ಯಕೀಯ ಪ್ರಾಧಿಕಾರ/ ಬೆಂಗಳೂರು ವೈದ್ಯಕೀಯ ಪ್ರಾಧಿಕಾರ ಇವರಿಂದ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ದಿನಾಂಕದೊಳಗಾಗಿ ಪಡೆದು ಇಟ್ಟುಕೊಳ್ಳತಕ್ಕದ್ದು. ತಪ್ಪಿದ್ದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು.

12/7/26

13. ಅಧಿಸೂಚಿಸಿರುವ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಆಯಾ ಗ್ರಾಮ ಪಂಚಾಯಿತಿಯ ವ್ಯಾಪ್ತಿಗೊಳಪಡುವ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ.

14. ಒಂದು ವೇಳೆ ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ನಕಲಿ ದಾಖಲೆಗಳು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಕಂಡುಬಂದಲ್ಲಿ ಅವರ/ ಅವಳ ವಿರುದ್ಧ ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಕ್ಷೆ ಒಳಗಾಗುವುದಲ್ಲದೆ ಹುದ್ದೆಯ ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.

15. ಅಧಿಸೂಚನೆಯಂತೆ ಆಯಾ ಹುದ್ದೆಗೆ ನಿಗದಿಪಡಿಸಿರುವ ವಯೋಮಿತಿ, ವಿದ್ಯಾರ್ಹತೆ, ಮೀಸಲಾತಿ, ಇತ್ಯಾದಿಗಳಿಗೆ ಅನುಗುಣವಾಗಿ ಅರ್ಜಿಯಲ್ಲಿ ಸರಿಯಾದ ಮಾಹಿತಿಯನ್ನು ನೀಡುವುದು ಅಭ್ಯರ್ಥಿಯ ಜವಾಬ್ದಾರಿಯಾಗಿರುತ್ತದೆ. ತಪ್ಪು ಮಾಹಿತಿ ನೀಡಿದ್ದಲ್ಲಿ ಅಂತಹ ಅಭ್ಯರ್ಥಿಗಳ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳುವುದರಿಂದ ಅರ್ಜಿ ಸಲ್ಲಿಸುವ ಮುನ್ನ ಅರ್ಜಿಯಲ್ಲಿ ನೀಡಿರುವ ಎಲ್ಲಾ ಮಾಹಿತಿಯು ಸರಿಯಾಗಿದೆ ಎಂದು ಖಚಿತಪಡಿಸಿಕೊಂಡು ದೃಢೀಕರಣ ನೀಡುವುದು ಎಚ್ಚರ ವಹಿಸಬೇಕು.

16. ಸದರಿ ಅಧಿಸೂಚನೆಯಲ್ಲಿನ ಹುದ್ದೆಗಳಿಗೆ ಆಯ್ಕೆ ಮಾಡುವವರೆಗೂ ಸರ್ಕಾರ/ ಇಲಾಖೆಯಿಂದ ಯಾವುದಾದರೂ ತಿದ್ದುಪಡಿಯಾದಲ್ಲಿ/ ರದ್ದಾದಲ್ಲಿ ಅಂತಹ ತಿದ್ದುಪಡಿಗಳನ್ನು ಅಳವಡಿಸಿಕೊಂಡು ಅದರಂತೆ ಪ್ರಕಟಿಸಲಾಗುವುದು.

17. ಹುದ್ದೆಗೆ ನಿಗದಿಪಡಿಸಿರುವ ವಿದ್ಯಾರ್ಹತೆಯನ್ನು, ಪ್ರಮಾಣ ಪತ್ರಗಳು ಹಾಗೂ ಮೀಸಲಾತಿ ಪತ್ರಗಳು ನಕಲಿ ಎಂದು ದೃಡಪಟ್ಟಲ್ಲಿ ನಿಯಮಾನುಸಾರ ಕಾನೂನು ಕ್ರಮ ಕೈಗೊಳ್ಳಲಾಗುವುದು.

18. ಅಭ್ಯರ್ಥಿಗಳು ಅರ್ಜಿಯೊಂದಿಗೆ **ನಡತೆ ಪ್ರಮಾಣ** ಪತ್ರವನ್ನು ಸಲ್ಲಿಸತಕ್ಕದ್ದು.

19. ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರದ ಮೇಲ್ವಿಚಾರಕರ ಹುದ್ದೆಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಕಡ್ಡಾಯವಾಗಿ **ರಾಜ್ಯ ಸರ್ಕಾರದಿಂದ ಮಾನ್ಯತೆ ಪಡೆದ ಯಾವುದೇ ಸಂಸ್ಥೆಯಿಂದ 3 ತಿಂಗಳು ಕಂಪ್ಯೂಟರ್ ತರಬೇತಿ ಪಡೆದಿರುವ ಪ್ರಮಾಣ ಪತ್ರ ಹೊಂದಿರಬೇಕು.**

20. ಅಧಿಸೂಚನೆಯಲ್ಲಿನ ಹುದ್ದೆಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು **ಕ್ರಿಮಿನಲ್ ಮೊಕದ್ದಮೆ ಇಲ್ಲದಿರುವ ಬಗ್ಗೆ ಸ್ವಯಂ ದೃಢೀಕರಣ ನೀಡತಕ್ಕದ್ದು** ಹಾಗೂ ಹುದ್ದೆಗೆ ಆಯ್ಕೆಯ ಸಮಯದಲ್ಲಿ ಅಭ್ಯರ್ಥಿಗಳ ಗುಣ ಮತ್ತು ನಡತೆ, ಪೂರ್ವಾಪರ ಚರಿತ್ರೆ ಹಾಗೂ ಕ್ರಿಮಿನಲ್ ಪ್ರಕರಣಗಳಲ್ಲಿ ಭಾಗಿಯಾಗಿದ್ದಾರೆಯೇ ಅಥವಾ ಇಲ್ಲವೇ ಎಂಬುದರ ಬಗ್ಗೆ ಪೊಲೀಸ್ ಇಲಾಖೆಯ ದೃಢೀಕರಣ ಪತ್ರ ಸಲ್ಲಿಸತಕ್ಕದ್ದು.

12/7/21

21. ಅಧಿಸೂಚಿಸಿದ ಹುದ್ದೆಗೆ ಆಯ್ಕೆಯಾಗುವ ಅಭ್ಯರ್ಥಿಗಳು ಇತರೆ ಯಾವುದೇ ಸರ್ಕಾರಿ/ಖಾಸಗಿ/ಸಂಸ್ಥೆಯಲ್ಲಿ ಹುದ್ದೆ ನಿರ್ವಹಿಸುವಂತಿಲ್ಲ.

22. ಅಧಿಸೂಚಿಸಿದ ಹುದ್ದೆಗೆ ಅರ್ಜಿ ಸಲ್ಲಿಸಿದ ಅಭ್ಯರ್ಥಿ ಸರ್ಕಾರಕ್ಕೆ ಬೇ-ಬಾಕಿ ಉಳಿಸಿಕೊಂಡಿರತಕ್ಕದ್ದಲ್ಲ. ಇದಕ್ಕೆ ಸ್ವಯಂ ದೃಢೀಕರಣ ನೀಡತಕ್ಕದ್ದು.

23. ಅಧಿಸೂಚಿಸಿದ ಹುದ್ದೆಗಳ ವೇತನ ಹಾಗೂ ಇತರೆ ಭತ್ಯೆಗಳು ಸರ್ಕಾರ/ ಕಾರ್ಮಿಕ ಇಲಾಖೆಯಿಂದ ಹೊರಡಿಸುವ ಆದೇಶಕ್ಕೆ ಒಳಪಟ್ಟಿರುತ್ತದೆ.

24. ಆಯ್ಕೆ ಸಮಿತಿಯು ಖಾಲಿ ಇರುವ ಹುದ್ದೆಗಳ ವರ್ಗೀಕರಣಕ್ಕೆ ಸಂಬಂಧಿಸಿದಂತೆ ಅರ್ಹತಾ ಪರೀಕ್ಷೆಯಲ್ಲಿ ಗಳಿಸಿದ ಗರಿಷ್ಠ ಅಂಕಗಳನ್ನು ಆಧರಿಸಿ ಅಧಿಸೂಚಿಸಿದ ಖಾಲಿ ಹುದ್ದೆಗಳಿಗೆ ಸಮವಾಗಿ ಆಯ್ಕೆ ಪಟ್ಟಿಯನ್ನು ತಯಾರಿಸಲಾಗುವ ಹಕ್ಕುಗಳನ್ನೊಳಗೊಂಡಿರುತ್ತದೆ.

25. ಆಯ್ಕೆಯಾದ ಅರ್ಹ ಅಭ್ಯರ್ಥಿಗಳ ಮೂಲ ದಾಖಲಾತಿಗಳನ್ನು ಪರಿಶೀಲಿಸಿದ ನಂತರ ಆಯ್ಕೆ ಪಟ್ಟಿಯಂತೆ ನೇಮಕ ಮಾಡಲಾಗುವ ಷರತ್ತಿಗೊಳಪಡಟ್ಟಿರುತ್ತದೆ.

**26. ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಆಯ್ಕೆ ಸಮಿತಿಯ ಅಧ್ಯಕ್ಷರಾಗಿದ್ದು, ಜಿಲ್ಲೆಯನ್ನು ರೋಸ್ಟರ್ ಬಿಂದುವಾಗಿ ಒಂದು ಯೂನಿಟ್ ಎಂದು ಪರಿಗಣಿಸಿ ಸರ್ಕಾರವು ಕಾಲ ಕಾಲಕ್ಕೆ ಹೊರಡಿಸುವ ಮಾರ್ಗಸೂಚಿಯನುಸಾರ ಕ್ರಮವಹಿಸುವ ಷರತ್ತಿಗೊಳಪಡಟ್ಟಿರುತ್ತದೆ.**

***27. ಈ ಮೇಲ್ಕಂಡ ನೇಮಕಾತಿಯು ಸರ್ಕಾರದ ಅಧಿಸೂಚನೆ ಸಂಖ್ಯೆ: ಆರ್‌ಡಿಪಿಆರ್/ 156/ ಜಿಪಿಎ/ 2022(ಇ) ದಿನಾಂಕ: 14-11-2022ರ ಷರತ್ತು ಮತ್ತು ನಿಬಂಧನೆಗೆ ಒಳಪಟ್ಟಿರುತ್ತದೆ. ಸದರಿ ಹುದ್ದೆಗಳ ಆಯ್ಕೆಯಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ/ ಆಯ್ಕೆ ಸಮಿತಿಯ ನಿರ್ಣಯವೇ ಅಂತಿಮವಾಗಿರುತ್ತದೆ.***

28. ತಾತ್ಕಾಲಿಕ ಅಭ್ಯರ್ಥಿ ಪಟ್ಟಿ ಪ್ರಕಟಿಸುವ ಮುನ್ನ ದಾಖಲಾತಿಗಳ ಪರಿಶೀಲನೆ ಮಾಡಲಾಗುವುದು.

29. ಅಭ್ಯರ್ಥಿಗಳನ್ನು ಮೆರಿಟ್ ಆಧಾರದ ಮೇಲೆ, ಕ್ರೋಢೀಕೃತ ಮೀಸಲಾತಿ ಅನುಸಾರ, ಅಧಿಸೂಚಿತ ಹುದ್ದೆಗಳಿಗೆ ಅನುಗುಣವಾಗಿ ದಾಖಲಾತಿಗಳ ಪರಿಶೀಲನೆಗೆ ಆಹ್ವಾನಿಸಲಾಗುವುದು.

30. **ಅಭ್ಯರ್ಥಿಗಳು ಅರ್ಜಿಯೊಂದಿಗೆ ಸಲ್ಲಿಸಿದ ಎಲ್ಲಾ ಮೂಲ ದಾಖಲಾತಿಗಳನ್ನು ನೈಜತೆ ಪರೀಕ್ಷೆಗೆ ಒಳಪಡಿಸಲಾಗುವುದು**. ಅದರಲ್ಲಿ ಅಭ್ಯರ್ಥಿಯ ನೈಜತೆ ದೃಢಪಡದೆ ಇದ್ದಲ್ಲಿ ಅಂತಹ ಅಭ್ಯರ್ಥಿಗಳನ್ನು ನೇಮಕಾತಿಗೆ ಪರಿಗಣಿಸಲಾಗುವುದಿಲ್ಲ.

31. ಅಧಿಸೂಚಿಸಿರುವ ಹುದ್ದೆಗಳಿಗೆ ಅಭ್ಯರ್ಥಿಗಳು ಅರ್ಜಿಯೊಂದಿಗೆ ಸಲ್ಲಿಸುವ ಎಲ್ಲಾ ಅಗತ್ಯ ದಾಖಲೆಗಳನ್ನು ಪತ್ರಾಂಕಿತ ಅಧಿಕಾರಿಗಳಿಂದ ದೃಢೀಕರಿಸಿ ಸಲ್ಲಿಸುವುದು.

12/7/26

32. **ಅರ್ಜಿ ಸಲ್ಲಿಸಲು ಆರಂಭ ದಿನಾಂಕ:13.07.2026 ಕೊನೆಯ ದಿನಾಂಕ:27.07.2026**

33. ಅರ್ಜಿಯನ್ನು **https://zpyadgiri.karnataka.gov.in** ವೆಬ್ ಸೈಟ್ ಮುಖಾಂತರ ಸಲ್ಲಿಸುವುದು.

34. ನೇಮಕಾತಿ ಸಂಬಂಧಿಸಿದ ಯಾವುದೇ ಬದಲಾವಣೆಗೆ ಅಭ್ಯರ್ಥಿಗಳು ನಿಯಮಿತವಾಗಿ ಜಿಲ್ಲಾ ಪಂಚಾಯತ್ ಜಾಲತಾಣವನ್ನು ಪರಿಶೀಲಿಸುವುದು.

12/7/2026

**ಉಪ ಕಾರ್ಯದರ್ಶಿಗಳು ಹಾಗೂ**
**ಸದಸ್ಯ ಕಾರ್ಯದರ್ಶಿಗಳು, ಗ್ರಾಮ ಪಂಚಾಯತಿ**
**ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರದ ಮೇಲ್ವಿಚಾರಕರ**
**ಆಯ್ಕೆ ಸಮಿತಿ, ಜಿಲ್ಲಾ ಪಂಚಾಯತ್, ಯಾದಗಿರಿ**

ಪ್ರತಿಯನ್ನು :

1. ಮಾನ್ಯ ಸರ್ಕಾರದ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
2. ಮಾನ್ಯ ಆಯುಕ್ತರು, ಕರ್ನಾಟಕ ಪಂಚಾಯತ ರಾಜ್ ಆಯುಕ್ತಾಲಯ, ಕಾಳಿದಾಸ ಮಾರ್ಗ, ಗಾಂಧಿನಗರ, ಬೆಂಗಳೂರು ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
3. ಜಿಲ್ಲಾ ಸೂಚನಾ ವಿಜ್ಞಾನಾಧಿಕಾರಿಗಳು, ಯಾದಗಿರಿ ಜಿಲ್ಲೆ, **https://zpyadgiri.karnataka.gov.in** ರ ವೆಬ್ ಸೈಟ್ ನಲ್ಲಿ ಪ್ರಕಟಿಸುವ ಕ್ರಮಕ್ಕಾಗಿ ಕಳುಹಿಸಿದೆ.
4. ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲೂಕು ಪಂಚಾಯತ್, **ಯಾದಗಿರಿ/ ಸುರಪುರ/ ಗುರುಮಠಕಲ್/ ವಡಗೇರಾ/ ಹುಣಸಗಿ** ಇವರಿಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.
5. ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತಿ **ವರ್ಕನಳ್ಳಿ, ಠಾಣಾಗುಂದಿ, ಅರಕೇರಾ.ಕೆ (ಬಿಜಾಸಪೂರ), ಅನಪೂರ, ವಡಗೇರಾ.ಹೆಚ್, ನಾರಾಯಣಪೂರ, ಮುದನೂರು(ಕೆ), ಅರಕೇರಾ.ಜೆ, ಬಂದಳ್ಳಿ, ಕಿಲ್ಲನಕೇರಾ ಮತ್ತು ಪುಟಪಾಕ** ಇವರಿಗೆ ನೀಡುತ್ತಾ, ಸದರಿ ನೇಮಕಾತಿ ಬಗ್ಗೆ ಗ್ರಾ.ಪಂ. ಕಾರ್ಯಾಲಯದ ಸೂಚನಾ ಫಲಕಕ್ಕೆ ಲಗತ್ತಿಸುವುದು ಹಾಗೂ ಗ್ರಾಮದಲ್ಲಿ ಸ್ವಚ್ಛ ವಾಹಿನಿಮುಖಾಂತರ ಸಾರುವುದು ಮತ್ತು ಸಾರ್ವಜನಿಕ ಸ್ಥಳಗಳಲ್ಲಿ ಮಾಹಿತಿ ಲಭ್ಯವಾಗುವಂತೆ ವ್ಯಾಪಕ ಪ್ರಚಾರ ಮಾಡುವುದು. (ಆಯಾ ತಾಲೂಕು ತಾ.ಪಂ ಮೂಲಕ)
6. ಕಛೇರಿ ಪ್ರತಿ.